ರಾಣಿ ಚನ್ನಮ್ಮ ವಿಶ್ವವಿದ್ಯಾಲಯ,
ರಾ. ಹೆ. – 04 "ವಿದ್ಯಾಸಂಗಮ" – ಬೆಳಗಾವಿ – 591156
ಪರೀಕ್ಷಾ ವಿಭಾಗ
RANI CHANNAMMA UNIVERSITY,
N.H. - 04 "VIDYASANGAMA"- BELAGAVI - 591156
"EXAMINATION SECTION"
Web Site: www.rcub.ac.in
E-mail: rcuexam@gmail.com

Ref No: ರಾಚವಿ/ಪರೀಕ್ಷಾ ವಿಭಾಗ/ಬೆಳಗಾವಿ/2018–19/5625

Date: 23/02/2019

# ಗೌಪ್ಯ ಆದೇಶ

ವಿಷಯ: ಸ್ನಾತಕ ಇಲೆಕ್ಟ್ರಾನಿಕ್ಸ ವಿಭಾಗದ ಪರೀಕ್ಷಾ ಮಂಡಳಿಗೆ ಅಧ್ಯಕ್ಷ/ಸದಸ್ಯರಾಗಿ ನೇಮಕ ಮಾಡಿರುವ ಕುರಿತು.

ಉಲ್ಲೇಖ: 1) ದಿನಾಂಕ 09/10/2018 ರಂದು ನಡೆದ ಪರೀಕ್ಷಕರ ನೇಮಕಾತಿ ಮಂಡಳಿ ಸಭೆ ನಿರ್ಣಯ.

2) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ 09/10/2018

| ಅ.ನಂ. | ಪರೀಕ್ಷಕರ ಹೆಸರು | ಮಹಾವಿದ್ಯಾಲಯದ ಹೆಸರು | ಹುದ್ದೆ |
|---|---|---|---|
| 1 | ಶ್ರೀ ಕೆ.ಎಮ್.ಕೊಟ್ರಯ್ಯ | ಎಸ್.ವಿ.ಎಮ್.ಮಹಾವಿದ್ಯಾಲಯ ಇಳಕಲ್ | ಅಧ್ಯಕ್ಷರು |
| 2 | ಶ್ರೀ ಸಿ.ಎನ್.ಚೌಗಲಾ | ಎಸ್.ಬಿ.ಕಲಾ & ಕೆಸಿಪಿ ವಿಜ್ಞಾನ ಮಹಾವಿದ್ಯಾಲಯ ವಿಜಯಪೂರ | ಸದಸ್ಯರು |
| 3 | ಡಾ.(ಶ್ರೀಮತಿ) ಆರ್.ಎಸ್.ಮಠದ | ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯ ಬಾಗಲಕೋಟ | ಸದಸ್ಯರು |
| 4 | ಡಾ.ಪಿ.ಆಯ್.ಮೆಂಡಿ | ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯ ಬಾಗಲಕೋಟ | ಸದಸ್ಯರು |
| 5 | ಶ್ರೀ ಬಿ.ಎಮ್.ಕರಿದ್ಯಾವಣ್ಣವರ | ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯ ಬಾಗಲಕೋಟ | ಸದಸ್ಯರು |

1) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ 2000ದ ಪ್ರಕರಣ (36) ರನ್ವಯ ತಮ್ಮನ್ನು 2018-19ನೇ ಶೈಕ್ಷಣಿಕ ಸಾಲಿನಲ್ಲಿ ಜರುಗು ಸ್ನಾತಕ **(U.G)** ಪರೀಕ್ಷೆಗಳಿಗೆ ಸಂಬಂಧಿಸಿದಂತೆ **ಇಲೆಕ್ಟ್ರಾನಿಕ್ಸ** ವಿಭಾಗದ ಪರೀಕ್ಷಾ ಮಂಡಳಿಯ ಅಧ್ಯಕ್ಷ/ ಸದಸ್ಯರನ್ನಾಗಿ ನೇಮ ಮಾಡಲಾಗಿದೆ.

2) ಸರ್ಕಾರದ ಆದೇಶ ಸಂಖ್ಯೆ ಇಡಿ 1000 ಯು ಎನ್ ಇ 2000 ದಿ 08-08-2000 ಮತ್ತು ಕರ್ನಾಟಕ ಶಿಕ್ಷಣ ಮಸೂದೆ 1983 ಸೆಕ್ಷನ್ 2 ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ 2000 ಅಧಿನಿಯಮ 73(01)ರನ್ವಯ ಪರೀಕ್ಷಾ ಕಾರ್ಯವನ್ನು ಕಡ್ಡಾಯವಾ ನಿರ್ವಹಿಸ ತಕ್ಕದ್ದು.

3) ಈ ಪತ್ರದ ವಿಷಯ ರಹಸ್ಯವಾಗಿರಲಿ. ಪರೀಕ್ಷಾ ಪ್ರಶ್ನೆ ಪತ್ರಿಕೆಯ ಗೌಪ್ಯತೆಯನ್ನು ಕಾಪಾಡುವ ಸಂಪೂರ್ಣ ಜವಾಬ್ದಾರಿಯು ಪರೀಕ್ಷಾ ಮಂಡಳಿಯದಾಗಿರುತ್ತದೆ. ಹೀಗಾಗಿ ಈ ವಿಷಯಕ್ಕೆ ಸಂಬಂಧಿಸಿದ ಎಲ್ಲಾ ಪತ್ರಗಳನ್ನು ಕುಲಸಚಿವರು (ಮೌಲ್ಯಮಾಪನ) ಇವರ ಹೆಸರಿಗೆ ಮಾತ್ರ ಕಳುಹಿಸಲು ತಿಳಿಸಲಾಗಿದೆ.

4) ತಾವು ಖಾಸಗಿ ಪಾಠ ಮಾಡುತ್ತಿದ್ದರೆ ಅಥವಾ ತಮ್ಮ ಸಂಬಂಧಿಕರು ರಾಣಿ ಚನ್ನಮ್ಮ ವಿಶ್ವ ವಿದ್ಯಾಲಯದಲ್ಲಿ ತಾವು ಬೋಧಿಸುವ ವಿಷಯದಲ್ಲಿ ಪರೀಕ್ಷೆ ತೆಗೆದುಕೊಂಡಿದ್ದಲ್ಲಿ ಮಾತ್ರ ಈ ನೇಮಕಾತಿ ಅಸಿಂಧುವಾಗುತ್ತದೆ. ತಾವು ಖಾಸಗಿಯಾಗಿ ಪಾಠ ಮಾಡುತ್ತಿದ್ದರೆ ಹಾಗೂ ತಮ್ಮ ಸಂಬಂಧಿಕರು ರಾಚವಿದಲ್ಲಿ ತಾವು ಬೋಧಿಸುತ್ತಿರುವ ವಿಷಯದಲ್ಲಿ ಪರೀಕ್ಷೆ ತೆಗೆದುಕೊಂಡಿದ್ದರೆ ಅದರ ಸಂಪೂರ್ಣ ವಿವರವನ್ನು ಕುಲಸಚಿವರು (ಮೌಲ್ಯಮಾಪನ) ಇವರಿಗೆ ತಲುಪುವಂತೆ ಕಳುಹಿಸಲು ಕೋರಿದೆ.

5) ಪರೀಕ್ಷೆ ಮಂಡಳಿಯ ಅಧ್ಯಕ್ಷರಾದ ತಾವು ಪ್ರಶ್ನೆ ಪತ್ರಿಕೆ ತಯಾರಕರ ಪಟ್ಟಿಯನ್ನು ತಯಾರಿಸಿ ಅವರಿಗೆ ಪ್ರಶ್ನೆಪತ್ರಿಕೆಗಳನ್ನು ನಿಗದಿತ ದಿನಾಂಕದಲ್ಲಿ ತಯಾರಿಸಲು ಸೂಚಿಸುವುದು .

6) ಪರೀಕ್ಷಾ ಮಂಡಳಿಯ ಅಧ್ಯಕ್ಷರಾದ ತಾವು ದಿನಾಂಕ :10/03/2019 ರಿಂದ 15/03/2019 ರೊಳಗೆ ಪರೀಕ್ಷಕ ಮಂಡಳಿಯ ಸಭೆಯನ್ನು ಕರೆದು 2, 4, ಹಾಗೂ 6 ನೇ ಸೆಮಿಸ್ಟರನ ಪ್ರಶ್ನೆ ಪತ್ರಿಕೆಗಳನ್ನು ಅಂತಿಮಗೊಳಿಸುವುದು. ಇದರ ನಂತರ ದಿನಾಂಕ ವಿಸ್ತರಿಸುವದಿಲ್ಲ.

7) ಪರೀಕ್ಷಾ ಮಂಡಳಿಯ ಸಭೆಗೆ ಪರೀಕ್ಷಕ ಮಂಡಳಿಯ ಎಲ್ಲಾ ಸದಸ್ಯರು ಸಭೆಗೆ ಕಡ್ಡಾಯಾವಾಗಿ ಹಾಜರಿರುವಂತೆ ನೋಡಿಕೊಳ್ಳುವ ಜವಾಬ್ದಾರಿ ಮಂಡಳಿಯ ಅಧ್ಯಕ್ಷರದ್ದಾಗಿರುತ್ತದೆ. ಸಕಾರಣವಿಲ್ಲದೆ ಹಾಜರಾಗದ ಸದಸ್ಯರ ವಿವರಗಳನ್ನು ಅಧ್ಯಕ್ಷರು ಕುಲಸಚಿವರು(ಮೌಲ್ಯಮಾಪನ) ಇವರಿಗೆ ನೀಡುವದು.

8) ಪರೀಕ್ಷಕ ಮಂಡಳಿಯ (ಬಿ.ಓ.ಇ) ಸಭೆಯನ್ನು ನಿಗದಿತ ದಿನಾಂಕದೊಳಗೆ ನಡೆಸುವುದು ಮತ್ತು ಕೇವಲ ಒಂದು ಅಥವಾ ಎರಡು ದಿನಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಅಂತಿಮಗೊಳಿಸುವುದು ಹಾಗೂ ನಿಗದಿಪಡಿಸಿದ ಸ್ಥಳಗಳಲ್ಲಿ ಪ್ರಶ್ನೆಪತ್ರಿಕೆಯ ಅಂಕಗಳು, ವಿಷಯ ಕೋಡ ನಂಬರ್ ಹಾಗೂ ಪಠ್ಯಪುಸ್ತಕದ ಹೆಸರು ಸರಿಯಾಗಿ ನಮೂದಿಸುವುದು ಮತ್ತು ಪರೀಕ್ಷಾ ಮಂಡಳಿಯು ಇವುಗಳನ್ನು ಪರಿಶೀಲಿಸಿ ಕುಲಸಚಿವರು(ಮೌಲ್ಯಮಾಪನ) ಇವರಿಗೆ ಸಭೆಯ ನಡಾವಳಿಗಳೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.

9) ಈ ಸಭೆಗೆ ಹಾಜರಾಗುವ ಸದಸ್ಯರಿಗೆ ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ಪ್ರಯಾಣ ಭತ್ಯೆ/ ದಿನ ಭತ್ಯೆ/ ಸಂಭಾವನೆಗಳನ್ನು ನೀಡಲಾಗುವುದು.

10) ಎಲ್ಲ ಪ್ರಶ್ನೆಪತ್ರಿಕೆಗಳನ್ನು ನಿಗದಿತ ಪಠ್ಯಕ್ರಮ ಹಾಗೂ ಪ್ರಶ್ನೆಪತ್ರಿಕೆ ಮಾದರಿಗೆ ಅನುಸಾರವಾಗಿ (RCU Repeater/Regular) ಕಡ್ಡಾಯವಾಗಿ 02 ಸೆಟ್‌ಗಳಲ್ಲಿ ತಯಾರಿಸುವುದು. ಪ್ರಶ್ನೆಗಳು ಪುನರಾವರ್ತನೆಯಾಗದಂತೆ, ಎರಡು ಸೆಟ್‌ಗಳಲ್ಲೂ ಪ್ರಶ್ನೆಗಳು ಬೇರೆ ಬೇರೆಯಾಗಿರುವಂತೆ ಎಚ್ಚರ ವಹಿಸುವುದು ಮತ್ತು ಪ್ರಶ್ನೆಪತ್ರಿಕೆಗಳ ಮಾದರಿ ಉತ್ತರಗಳನ್ನು (Scheme of Evaluation) ಕಡ್ಡಾಯವಾಗಿ ಸಲ್ಲಿಸುವದು.

Principal,
S.B.Arts & K.C.P. Science College,
VIJAYAPUR.

IQAC, Co-ordinator
S.B.Arts & K.C.P. Science College,
Vijayapur.